ಪಡಿತರ ಸಾಮಗ್ರಿಗಳ ಬೆಲೆ ಏರಿಕೆ ಬಗ್ಗೆ

329 (696) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೇಂದ್ರ ಸರ್ಕಾರವು ಪಡಿತರ ಸಾಮಗ್ರಿಗಳ ಬೆಲೆಯನ್ನು ಏರಿಸಿರುವುದರಿಂದ ರಾಜ್ಯದ ಜನರು ತೊಂದರೆ ಅನುಭವಸುವುದರ ಬದಲು ಆ ಹೆಚ್ಚುವರಿ ಹೊರೆಯನ್ನು ರಾಜ್ಯ ಸರ್ಕಾರವೇ ಭರಿಸಲು ಉದ್ದೇಶಿಸಿದೆಯೇ;

ಆ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಜಿ.ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಹೌದು

ಆ) ಕರ್ನಾಟಕ ರಾಜ್ಯದಲ್ಲಿ ಇತ್ತೀಚೆಗೆ ನೀಡಿದ 6.5ಲಕ್ಷ ಹಸಿರು ಪಡಿತರ ಚೀಟಿಗಳನ್ನು ಒಳ ಗೊಂಡಂತೆ ಒಟ್ಟು66 ಲಕ್ಷ ಕುಟುಂಬಗಳಿಗೆ ಹಸಿರು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ. ಆದರೆ ಕೇಂದ್ರ ಸರ್ಕಾರವು ರಾಜ್ಯದಲ್ಲಿ28.75 ಲಕ್ಷ ಕುಟುಂಬಗಳು ಮಾತ್ರ ಬಡತನರೇಖೆಗಿಂತ ಕೆಳಗಿನ ಕುಟುಂಬಗಳೆಂದು ಅಂದಾಜು ಮಾಡಿದೆ ಮತ್ತು ಅವರಿಗೆ ಮಾತ್ರ ಸಹಾಯಧನ ನೀಡುತ್ತಿದೆ. ಆದರೆ ರಾಜ್ಯದಲ್ಲಿ 37.25 ಲಕ್ಷ ಹೆಚ್ಚುವರಿ ಬಡ ತನ್ನ ರೇಖೆಗಿಂತ ಕೆಳಗಿನ ಕುಟುಂಬಗಳು ಇರತ್ತದೆ. ಕರ್ನಾಟಕ ಸರ್ಕಾರವು ಈ ಹೆಚ್ಚುವರಿ ಬಡಕುಟುಂಬಗಳಿಗೂ ಸಹ ಕೇಂದ್ರಸರ್ಕಾರ ಬಡಕುಟುಂಬಗಳಿಗೆ ಒದಗಿಸುವ ದರ ಹಾಗೂಪ್ರಮಾಣದಲ್ಲಿಆಹಾರ ಧಾನ್ಯಗಳನ್ನು ವಿತರಿಸಲು ನಿರ್ಧರಿಸಿದ್ದು ಈ ಹೆಚ್ಚುವರಿ ಬಿಪಿಎಲ್ ಕುಟುಂಬಗಳಿಗೆ ಆಹಾರ ಧಾನ್ಯವನ್ನು ಕೇಂದ್ರದ ವಿತರಣಾ ದರದಲ್ಲಿ ಆಹಾರಧಾನ್ಯಗಳನ್ನು ಖರೀದಿಸಲಾಗುತ್ತಿದೆ. ಆದ್ದರಿಂದರಾಜ್ಯ ಸರ್ಕಾರಕ್ಕೆ ಈ ವರ್ಷ ಹೆಚ್ಚುವರಿಯಾಗಿ ಸುಮಾರು 127 ಕೋಟಿ ರೂಗಳು ಖರ್ಚಾಗುವುದು.

ಬೆಂಗಳೂರು ನಗರದಲ್ಲಿ ರಸ್ತೆ ಸೇತುವೆ ಅಭಿವೃದ್ಧಿಗಾಗಿ ಪ್ರತ್ಯೇಕ ಪ್ರಾಧಿಕಾರ

330 (698) ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದ ಸಾರಿಗೆ ರಸ್ತೆ, ಸೇತುವೆ ಮುಂತಾದವುಗಳ ಅಭಿವೃದ್ಧಿ ಕಾಮಗಾರಿಗಳನ್ನು ಉಸ್ತುವಾರಿ ಮಾಡಲು ಪ್ರತ್ಯೇಕ ಪ್ರಾಧಿಕಾರ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಕೈ ಗೊಂಡ ಕ್ರಮಗಳೇನು?

ಶ್ರೀ ವಿ.ಸೋಮಣ್ಣ (ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರು) :

ಅ)-ಇಲ್ಲ-

ಆ)-ಉದ್ಭವಿಸುವುದಿಲ್ಲ-